ಎಲ್.ಎ.ಸಿ.ಸಂಖ್ಯೆ: 52/2017
ಪಿ ಡಬ್ಲೂಃ 1

ದಿನಾಂಕ *:20.09.2024* ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಬಿ.ಪಿ.ಆರ್. ವಕೀಲರಿಂದ ಅರ್ಜಿದಾರರ ಪರವಾಗಿಃ

1. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಸಹಿ ನನ್ನದು. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುತ್ತದೆ ಮತ್ತು ಸತ್ಯವಾಗಿರುತ್ತದೆ. ಅದನ್ನು ಓದಿ ತಿಳಿದುಕೊಂಡು ಅದಕ್ಕೆ ನನ್ನ ಸಹಿಯನ್ನು ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ತಿಳಿಸಿದ ಕಾರಣಗಳಿಗಾಗಿ ನನ್ನ ಅರ್ಜಿಯನ್ನು ಪುರಸ್ಕರಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

2. ನನ್ನ ತಂದೆಯು ನನಗೆ ಬರೆದುಕೊಟ್ಟಿರುವ ವಿಶೇಷ ಮೊಕ್ತಿಯಾರ್ ನಾಮೆ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಹಳಿಯೂರು ಗ್ರಾಮದ ಸರ್ವೆ ನಂ. 168/3 ಕ್ಕೆ ಸಂಬಂಧಿಸಿದ ಪಹಣಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು. ಭೂ ಸ್ವಾಧೀನಾಧಿಕಾರಿಗಳು ನೀಡಿರುವ ನೋಟೀಸಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು.

3. ದಿನಾಂಕಃ 11-03-2014 ರಂದು ತರೀಕೆರೆ ಉಪ ವಿಭಾಗಾಧಿಕಾರಿಗಳು ಭೂಸ್ವಾಧೀನ ಕಾಯ್ದೆ ಕಲಂ9(1) ಮತ್ತು 10 ರ ಅಡಿಯಲ್ಲಿ ನೀಡಿರುವ ನೋಟೀಸಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು. ದಿನಾಂಕಃ 13-08-2015 ರ ಅಂತಿಮ ಐತೀರ್ಪಿನ ತಿಳುವಳಿಕೆ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.5 ಎಂದು ಗುರುತಿಸಲಾಯಿತು. ದಿನಾಂಕಃ 23-08-2012 ರಂದು publish ಆಗಿರುವ ದಿನಾಂಕಃ17-08-2012 ರ ಭೂ ಸ್ವಾಧೀನ ಅಧಿನಿಯಮ ಕಲಂ.4(1) ರ ಅಧಿಸೂಚನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.6 ಎಂದು ಗುರುತಿಸಲಾಯಿತು.

4. ದಿನಾಂಕಃ 17-10-2013 ರಂದು publish ಆಗಿರುವ ದಿನಾಂಕಃ

ಎಲ್.ಎ.ಸಿ.ಸಂಖ್ಯೆ: 52/2017
ಪಿ ಡಬ್ಲೂ: 1

28-09-2013 ರ ಭೂ ಸ್ವಾಧೀನ ಅಧಿನಿಯಮ ಕಲಂ.6(1) ರ ಅಧಿಸೂಚನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.7 ಎಂದು ಗುರುತಿಸಲಾಯಿತು. ಸದರಿ ಅಧಿಸೂಚನೆಯಲ್ಲಿ ಅರ್ಜಿದಾರರಿಗೆ ಸಂಬಂಧಿಸಿದಂತೆ ಕ್ರ.ಸಂ. 53 ರಲ್ಲಿ ನಮೂದಾಗಿರುವ ವಿವರಗಳನ್ನು ನಿ.ಪಿ.7(ಎ) ಎಂದು ಗುರುತಿಸಲಾಯಿತು. ಭದ್ರಾ ಮೇಲ್ದಂಡೆ ಯೋಜನೆ 2 ರ ಕಾಮಗಾರಿಯ 6(1)ರ ಜಂಟಿ ಅಳತೆಯ ತಃಖ್ತೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.8 ಎಂದು ಗುರುತಿಸಲಾಯಿತು. ಸದರಿ ತಃಖ್ತೆಯಲ್ಲಿ ಅರ್ಜಿದಾರರಿಗೆ ಸಂಬಂಧಿಸಿದಂತೆ ಕ್ರ.ಸಂ. 30 ರಲ್ಲಿ ನಮೂದಾಗಿರುವ ವಿವರಗಳನ್ನು ನಿ.ಪಿ.8(ಎ) ಎಂದು ಗುರುತಿಸಲಾಯಿತು. ಭದ್ರಾ ಮೇಲ್ದಂಡೆ ಪ್ಯಾಕೇಜ್-2 ರ ಹಳಿಯೂರು ಗ್ರಾಮದ 74.02 ಎಕರೆಗೆ ಸಂಬಂಧಿಸಿದ ಐತೀರ್ಪಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.9 ಎಂದು ಗುರುತಿಸಲಾಯಿತು.

5. ದಿನಾಂಕ: 06-08-2024 ರಂದು ತರೀಕೆರೆ ಪುರಸಭೆಯ ಮುಖ್ಯಾಧಿಕಾರಿಗಳು ನೀಡಿರುವ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.10 ಎಂದು ಗುರುತಿಸಲಾಯಿತು. ತರೀಕೆರೆ ಮುನ್ಸಿಪಲ್ planning authority ಯಿಂದ ಅಂಗೀಕೃತಗೊಂಡಿದೆ ಎಂದು ಹೇಳಲಾದ ನಕ್ಷೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.11 ಎಂದು ಗುರುತಿಸಲಾಯಿತು.

(ಅರ್ಜಿದಾರರ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಮುಂದಿನ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.